ಬಿ.ಟೆಕ್ ಪದವೀಧರರಿಗೂ ಅರ್ಜಿ ಸಲ್ಲಿಕೆಗೆ ಅವಕಾಶ

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗವು ಮಾ. 13ರಂದು ಹೊರಡಿಸಿದ್ದ ವಿವಿಧ ಇಲಾಖೆಯಲ್ಲಿನ ಗ್ರೂಪ್ ಬಿ ವೃಂದದ 277 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಹೊರಡಿಸಿದ್ದ ಅಧಿಸೂಚನೆಯಲ್ಲಿ ತಿದ್ದುಪಡಿ ಮಾಡಿ ಆದೇಶ ಹೊರಡಿಸಿದೆ.

ಜಲ ಸಂಪನ್ಮೂಲ ಇಲಾಖೆಯಲ್ಲಿ ಸಹಾಯಕ ಎಂಜಿನಿಯರ್ (ಸಿಲ್)-90 ಮತ್ತು ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್)- 10 ಹುದ್ದೆಗಳಿಗೆ ಇಲಾಖೆಯ ಪ್ರಸ್ತಾವನೆಯಂತೆ ನಿಗದಿಪಡಿಸಲಾಗಿದ್ದ ವಿದ್ಯಾರ್ಹತೆಯ ಕೋರ್ಸ್‌ಗಳಲ್ಲಿ ಬಿಇ ಪದವಿಗಳನ್ನು ಮಾತ್ರ ಪರಿಗಣಿಸಿ, ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಪ್ರಸ್ತುತ ತಿದ್ದುಪಡಿ ಮಾಡಲಾಗಿದ್ದು, ಹುದ್ದೆಗಳಿಗೆ ಬಿ.ಟೆಕ್ ಪದವಿಯನ್ನೂ ಪರಿಗಣಿಸಲಾಗುವುದು ಎಂದು ತಿಳಿಸಲಾಗಿದೆ. ಸಹಾಯಕ ಎಂಜಿನಿಯರ್ ಹುದ್ದೆಗಳಿಗೆ ಬಿಇ ಹಾಗೂ ಬಿಟೆಕ್ ಪದವಿ ದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಕೆಗೆ ಮೇ 25ರವರೆಗೆ ಕಾಲಾವಕಾಶ ನೀಡಲಾಗಿದ್ದು, ವಿದ್ಯಾರ್ಹತೆ ಹೊರತುಪಡಿಸಿ ಅಧಿಸೂಚನೆಯಲ್ಲಿ ಬೇರೆ ಯಾವುದೇ ಬದಲಾವಣೆ ಮಾಡಿಲ್ಲ ಎಂದು ಕೆಪಿಎಸ್‌ಸಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಪೆನ್‌ಡ್ರೈವ್ ಪ್ರಕರಣ: ನಿಷ್ಪಕ್ಷಪಾತ ತನಿಖೆಗೆ ಆಗ್ರಹ



ಬೆಂಗಳೂರು: ಹಾಸನದ ಲೈಂಗಿಕ ಕಿರುಕುಳ ಪ್ರಕರಣದಲ್ಲಿ ರಾಜಕೀಯ ತೊಡಕು ಹಾಕಿ ಕೊಂಡಿದ್ದು, ನಿಷ್ಪಕ್ಷಪಾತವಾಗಿ ತನಿಖೆ ಮಾಡಬೇಕೆಂದು ಹಿರಿಯ ನ್ಯಾಯವಾದಿ ಸಿ.ಎಚ್. ಹನುಮಂತರಾಯ ಒತ್ತಾಯಿಸಿದ್ದಾರೆ.

ನಗರದಲ್ಲಿ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಮಹಿಳಾ ಸಮಾವೇಶದಲ್ಲಿ ಮಾತನಾಡಿದ ಅವರು, ಈ ಪ್ರಕರಣದ ಆರೋಪಿಗಳು ಸಾಕಷ್ಟು ಬಲಶಾಲಿಗಳಾಗಿದ್ದು, ಸಾಕ್ಷಿಗಳನ್ನು ತಿರುಚುವ, ಅಳಿಸಿಹಾಕುವ ಸಾಧ್ಯತೆಗಳಿವೆ. ಹಾಸನದ ಲೈಂಗಿಕ ದೌರ್ಜನ್ಯದ ಸಂತ್ರಸ್ತೆಯರಿಗೆ ನ್ಯಾಯ ಮತ್ತು ರಕ್ಷಣೆ, ಹಾಗೂ ಅಪರಾಧಿಗಳಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಆಗ್ರಸಿದರು. ವೈದ್ಯ ಡಾ.ಸುಧಾಕಾಮತ್ ಮಾತನಾಡಿ, ಪ್ರಜ್ವಲ್ ರೇವಣ್ಣ ಅತ್ಯಾಚಾರ ಎಸಗುವುದಷ್ಟೇ ಅಲ್ಲದೆ ಅದನ್ನು ವಿಡಿಯೊ ಮಾಡಿಟ್ಟುಕೊಂಡು ಹೆಣ್ಣುಮಕ್ಕಳನ್ನು ಬ್ಲಾಕ್‌ಮೇಲ್ ಮಾಡಲು ಬಳಸುತ್ತಿದ್ದ. ಪೆನ್‌ಡ್ರೈವ್‌ಗಳ ಮೂಲಕ ಈ ವಿಡಿಯೊಗಳು ಹಾಸನದ ಹಾದಿಬೀದಿಗಳಲ್ಲಿ ಸಿಗುವಂತಾದ್ದರಿಂದ ದೌರ್ಜನ್ಯಕ್ಕೊಳಗಾದ ಹೆಣ್ಣುಮಕ್ಕಳ ಮಾನ ಹರಣವಾಗಿದೆ ಎಂದು ಆರೋಪಿಸಿದರು.

ವಿಮಾನ ನಿಲ್ದಾಣ ರಸ್ತೆಯಲ್ಲಿ ವೇಗಮಿತಿ ಮೀರಿದರೆ ದಂಡ

ಬೆಂಗಳೂರು: ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯಲ್ಲಿ ಸಂಭವಿಸುತ್ತಿರುವ ಅಪಘಾತ ಪ್ರಕರಣಗಳನ್ನು ನಿಯಂತ್ರಿಸಲು, ಅತಿವೇಗದ ಚಾಲನೆಯನ್ನು ಪತ್ತೆ ಹಚ್ಚುವ ಸ್ವಯಂಚಾಲಿತ ಕ್ಯಾಮೆರಾಗಳ ಮೂಲಕ ದಂಡ ವಿಧಿಸುವ ಕೆಲಸಕ್ಕೆ ಬೆಂಗಳೂರು ನಗರ ಸಂಚಾರಿ ಪೊಲೀಸರು ಮುಂದಾಗಿದ್ದಾರೆ. ಚಾಲಕರ ಅತಿವೇಗದ ಚಾಲನೆಯಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯಲ್ಲಿ ಅಪಘಾತಗಳು ಹೆಚ್ಚುತ್ತಿರುವುದರಿಂದ, ರಸ್ತೆ ಸುರಕ್ಷತೆ ಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸ್ವಯಂ ಚಾಲಿತವಾಗಿ ಅತಿವೇಗದ ಚಾಲನೆ ಪತ್ತೆ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಹಿಂದಿನ 2ವರ್ಷಗಳಿಗೆ ಹೋಲಿಸಿದರೆ 2024ರ ಏಪ್ರಿಲ್ 30ರ ವರೆಗಿನ ಅಂಕಿ ಅಂಶದ ಪ್ರಕಾರ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯಲ್ಲಿ ಅಪಘಾತ ಪ್ರಕರಣಗಳ ಸಂಖ್ಯೆ ಏರಿಕೆಯಾಗಿದೆ ಆದ್ದರಿಂದ ಈ ವೇಗಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ಅತಿವೇಗದ ಚಾಲನೆ ಪತ್ತೆ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಪ್ರತಿ ಗಂಟೆಗೆ 80 ಕಿ.ಮೀ ಗಿಂತ ವೇಗವಾಗಿ ಚಲಿಸುವ ವಾಹನಗಳ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಿಧಿಸಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಮೇ 21ರಿಂದ ನರಸಿಂಹ ಜಯಂತಿ ಮಹೋತ್ಸವ

ಬೆಂಗಳೂರು: ನಗರದಲ್ಲಿ 'ಶ್ರೀ ವಜ್ರ ಕ್ಷೇತ್ರ,' ಎಂದೇ ಖ್ಯಾತಿ ಪಡೆದಿರುವ ಬಸವನಗುಡಿಯ ತ್ಯಾಗರಾಜನಗರದ ಅಭಯ ಲಕ್ಷ್ಮೀ ನರಸಿಂಹ ದೇವಾಲಯದಲ್ಲಿ ಮೇ 21 ರಿಂದ 23 ರವರೆಗೆ 47ನೇ ವರ್ಷದ ವೈಭವದ 'ನರಸಿಂಹ ಜಯಂತಿ ಮಹೋತ್ಸವ'ವನ್ನು ಆಚರಿಸಲಾಗುತ್ತಿದೆ.

ಭಗವಾನ್ ಅಭಯ ಲಕ್ಷ್ಮೀ ನರಸಿಂಹ, ಭಗವಾನ್ ಅಶ್ವಥ ಕುಬೇರ ಲಕ್ಷ್ಮೀ ನರಸಿಂಹ ಮತ್ತು ಕಂಬದ ನರಸಿಂಹನ ವಜ್ರದ ಆಕಾರದ ಸ್ವರೂಪದಿಂದಾಗಿ ಈ ಹೆಸರು ಬಂದಿದ್ದು, ನಗರದಲ್ಲಿ ನರಸಿಂಹ ಜಯಂತಿಗೆ ತನ್ನದೇ ಆದ ಮಹತ್ವ ಪಡೆದುಕೊಂಡಿದೆ. ಮೇ 21 ರಂದು ನರಸಿಂಹ ಜಯಂತಿ ಅಂಗವಾಗಿ ನರಸಿಂಹ ತಾರಕ ಹೋಮ, ಇಡೀ ದಿನ ಧ ಪೂಜಾ ಕೈಂಕರ್ಯಗಳು ನೆರವೇರಲಿವೆ. ಮೇ 22 ರಂದು ಕಲ್ಯಾಣೋತ್ಸವ, ಅಶ್ವತ್ಥ ಕುಬೇರ ಲಕ್ಷ್ಮೀನರಸಿಂಹ ದೇವರಿಗೆ ಮಹಾ ಅಭಿಷೇಕ ಹಾಗೂ ನಾಣ್ಯ ಅಭಿಷೇಕ, ಮೇ 23 ರಂದು ನರಸಿಂಹ ಸ್ಥಂಭಕ್ಕೆ ಮಹಾಭಿಷೇಕ ನಡೆಯಲಿದೆ ಎಂದು ದೇವಸ್ಥಾನದ ಟ್ರಸ್ಟಿ ಅರುಣ್ ಚಿಂತೋಪಂತ್ ಡಿ. ರಮಾಬಾಯಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಾಚಾರ ಸಣ್ಣದಲ್ಲ

ಕಲ್ಲು ಎತ್ತಿಹಾಕಿ ಹತ್ಯೆ

ಬೆಂಗಳೂರು: ವ್ಯಕ್ತಿಯೊಬ್ಬನ ತಲೆ ಮೇಲೆ ಕಲ್ಲು ಎತ್ತಿ ಹಾಕಿ ಹತ್ಯೆಗೈದಿರುವ ಘಟನೆ ಸೋಮವಾರ ತಡರಾತ್ರಿ, ಜಯನಗರ 7ನೇ ಹಂತದಲ್ಲಿ ನಡೆದಿದೆ. ಘಟನಾ ಸ್ಥಳಕ್ಕೆ ಬನಶಂಕರಿ ಠಾಣಾ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.ರಾತ್ರಿ ರಸ್ತೆ ಬದಿಯಲ್ಲಿ ಮಲಗಿದ್ದವನ ಮೇಲೆ ಮತ್ತೋರ್ವ ವ್ಯಕ್ತಿ ಬಂದು ಬಿದ್ದಿದ್ದು, ಇದೇ ವಿಚಾರವಾಗಿ ಇಬ್ಬರ ನಡುವೆ ಆರಂಭವಾದ ಗಲಾಟೆ ಹತ್ಯೆಯಲ್ಲಿ ಅಂತ್ಯವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬನಶಂಕರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿ ಪತ್ತೆಗೆ ಮುಂದಾಗಿದ್ದಾರೆ.

ಸಿಡಿಲಿಗೆ ಮಹಿಳೆ ಬಲಿ

ಬೆಂಗಳೂರು: ಸಿಡಿಲು ಬಡಿದು ಮಹಿಳೆ ಹಾಗೂ 20ಕ್ಕೂ ಹೆಚ್ಚು ಮೇಕೆಗಳು ಸಾವನ್ನಪ್ಪಿದ ಘಟನೆ ಹೊಸಕೋಟೆ ತಾಲೂಕಿನ ಗಣಗಲು ಗ್ರಾಮದಲ್ಲಿ ನಡೆದಿದೆ. ಗ್ರಾಮದ ರತ್ನಮ್ಮ ಸಿಡಿಲಿಗೆ ಬಲಿಯಾದ ಮಹಿಳೆ ಎಂದು ತಿಳಿದು ಬಂದಿದೆ. ಮಧ್ಯಾಹ್ನ ದಿಢೀರ್ ಮಳೆ ಆರಂಭವಾಗಿದ್ದು, ಮಹಿಳೆ ಬೇವಿನ ಮರದಡಿ ಮೇಕೆಗಳ ಜತೆ ನಿಂತಿದ್ದಾಗ ಸಿಡಿಲು ಬಡಿದಿದೆ. ಪರಿಣಾಮ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಡೇವ್ ಬ್ರೌನ್ ಕೃತಿಗಳ ಪ್ರದರ್ಶನ

ಬೆಂಗಳೂರು: ಭಾರತೀಯ ವ್ಯಂಗ್ಯಚಿತ್ರಕಾರರ ಸಂಸ್ಥೆ ವತಿಯಿಂದ ಇಂಗ್ಲೆಂಡಿನ ಪ್ರಸಿದ್ಧ ವ್ಯಂಗ್ಯಚಿತ್ರಕಾರ 'ಡೇವ್ ಬ್ರೌನ್' ಅವರ ಆಯ್ದ ಕೃತಿಗಳ ಪ್ರದರ್ಶನವನ್ನು ಜೂ.1 ರಿಂದ 15 ರವರೆಗೆ ಎಂ.ಜಿ.ರಸ್ತೆ, ಟ್ರಿನಿಟಿ ವೃತ್ತ ಸಮೀಪದ ಭಾರತೀಯ ವ್ಯಂಗ್ಯಚಿತ್ರ ಗ್ಯಾಲರಿಯಲ್ಲಿ ಏರ್ಪಡಿಸಲಾಗಿದೆ. ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಭಾನುವಾರ ಮತ್ತು ಸಾರ್ವಜನಿಕ ರಜೆ ಹೊರತುಪಡಿಸಿ ಸಾರ್ವಜನಿಕವಾಗಿ ಪ್ರದರ್ಶನವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ .ಜಿ.ನರೇಂದ್ರ 9980091428 ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಭಾರತೀಯ ವ್ಯಂಗ್ಯಚಿತ್ರಕಾರರ ಸಂಸ್ಥೆ ತಿಳಿಸಿದೆ.

ತಪ್ಪಿತಸ್ಥರಿಗೆ ಶಿಕ್ಷೆಯಾದ ಬಳಿಕ ಸಂಭ್ರಮಿಸೋಣ; ಅದಕ್ಕೂ ಮೊದಲೇ ಸಂಭ್ರಮಾಚರಣೆ ಬೇಡ
ಈವರೆಗೆ ಘಟನೆಗೆ ಕಾರಣರಾದವರನ್ನು ಬಂಧಿಸಿಲ್ಲ, ಇದು ಸರಕಾರದ ವೈಫಲ್ಯವಲ್ಲವೇ?

ರೇವಣ್ಣ ಬಂಧನ ರಾಜಕೀಯ ಪ್ರೇರಿತ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರ ಬಂಧನ ರಾಜಕೀಯ ಪ್ರೇರಿತ. ಈ ಎಲ್ಲದರ ಹಿಂದೆ ದೊಡ್ಡ ತಿಮಿಂಗಲವೇ ಇದೆ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಪರೋಕ್ಷವಾಗಿ ಡಿ.ಕೆ.ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವೇಗೌಡರ ಕುಟುಂಬಕ್ಕೆ ಕಳಂಕ ತರಲು ಈ ರೀತಿ ಮಾಡಿದ್ದಾರೆ. ವಕೀಲರಾದ ದೇವರಾಜೇಗೌಡರನ್ನು ಈಗ ಒಂದು ಪ್ರಕರಣದಲ್ಲಿ ಸಿಲುಕಿಸಿ ಬಂಧಿಸಿದ್ದು ಏಕೆ? ಒಂದು ತಿಂಗಳಿನಿಂದ ಏನೆಲ್ಲಾ ಬೆಳವಣಿಗೆ ನಡೆಯಿತು? ಆಡಿಯೊ ಮೂಲಕ ಸಿಕ್ಕಿಬಿದ್ದ ದೊಡ್ಡ ತಿಮಿಂಗಲವನ್ನು ಬಿಟ್ಟು ದೇವರಾಜೇಗೌಡರನ್ನು ಬಂಧನ ಮಾಡಿದ್ದಾರೆ ಎಂದು ಟೀಕಿಸಿದರು. ವಿಡಿಯೊದಲ್ಲಿ ಬಂದಂತಹ ಮಹಿಳೆಯರ ಕುಟುಂಬಗಳ ಬಗ್ಗೆ ಸರಕಾರಕ್ಕೆ ಅನುಕಂಪ ಎನ್ನುವುದು ಇದೆಯಾ? ಈ ಪ್ರಕರಣಕ್ಕೆ ಸಂಬಂಧಿಸಿ ನಾನು ಯಾರನ್ನೂ ವಹಿಸಿಕೊಳ್ಳುವ ಪ್ರಶ್ನೆ ಇಲ್ಲ. ಮಾಹಿತಿ ತಂತ್ರಜ್ಞಾನದ ಈ ಕಾಲದಲ್ಲಿ ಅಪರಾಧಿ ನಿರಪರಾಧಿಯಾಗುತ್ತಾನೆ. ಸರಕಾರಕ್ಕೆ ಬದ್ಧತೆಯಿದ್ದರೆ ತನಿಖೆಯನ್ನು ಸೂಕ್ತ ರೀತಿಯಲ್ಲಿ ನಡೆಸಲಿ. ಅದನ್ನು ಬಿಟ್ಟು ರೇವಣ್ಣ ಸುತ್ತ ತನಿಖೆ ಗಿರಕಿ ಹೊಡೆಯುವ ಅಗತ್ಯವಿಲ್ಲ ಎಂದರು ಅವರು.

ನಾನು ಎಸ್ ಐಟಿ ಅಧಿಕಾರಿಗಳಿಗೂ ತಂದೆ-ತಾಯಿ ಜನ್ಮ ಕೊಟ್ಟಿದ್ದಾರೆ. ಅಕ್ಕ ತಂಗಿ ಎಲ್ಲರೂ ನಿಮಗೂ ಇರುತ್ತಾರೆ. ದಯಮಾಡಿ ಪ್ರಾಮಾಣಿಕವಾಗಿ ತನಿಖೆ ನಡೆಸಿ. ಚುನಾವಣೆ ಸಂದರ್ಭದಲ್ಲಿ ಪೆನ್‌ಡ್ರೈವ್ ಹಂಚಿ ಅಶ್ಲೀಲ ದೃಶ್ಯಗಳ ಮೂಲಕ ಸಮಾಜದಲ್ಲಿ ಕೆಟ್ಟ ಪರಿಸ್ಥಿತಿಯನ್ನು ಸೃಷ್ಟಿ ಮಾಡಿದರಲ್ಲ, ಅವರನ್ನು ಇಲ್ಲಿಯವರೆಗೆ ನೀವು ಮುಟ್ಟಿಲ್ಲ. ಘಟನೆಗೆ ಕಾರಣನಾದ ವ್ಯಕ್ತಿಯನ್ನೂ ಹಿಡಿಯಲಿಲ್ಲ. ಇದೆಲ್ಲವನ್ನೂ ಮಾಡಬೇಕಾದದ್ದು ಸರಕಾರದ ಜವಾಬ್ದಾರಿ.

- ಎಚ್.ಡಿ. ಕುಮಾರಸ್ವಾಮಿ,
ಮಾಜಿ ಮುಖ್ಯಮಂತ್ರಿ

ಮಹಿಳೆಯರಿಗೆ ಹೆದರಿಸಿದ್ದು ಯಾರು?: ಮಹಿಳೆಯರಿಗೆ ನ್ಯಾಯ ಸಿಗುವಂತಾಗಬೇಕು. ರಾಷ್ಟ್ರೀಯ ಮಹಿಳಾ ಆಯೋಗಕ್ಕೆ ಓರ್ವ ನೊಂದ ಮಹಿಳೆ ದೂರು ಕೊಟ್ಟಿದ್ದಾರೆ. ಆ ಹೆಣ್ಣುಮಗಳಿಗೆ ಹೆದರಿಸಿ ಅವರಿಂದ ದೂರು ಪಡೆಯಲು ಪ್ರಯತ್ನ ಮಾಡಿದ್ದಾರೆ. ಅವರಿಗೆ ಹೆದರಿಸಿ ಬೆದರಿಸಿದವರು ಯಾರು? ಮಫ್ತಿಯಲ್ಲಿ ಅವರ ಮನೆ ಬಳಿ ಹೋಗಿ ಹೆದರಿಸಿದ್ದು ಯಾರು? ಇದೆಲ್ಲಾ ಎಸ್‌ಐಟಿಗೆ ಗೊತ್ತಾ? ಕೆಲವೇ ದಿನಗಳಲ್ಲಿ ಇದೆಲ್ಲಾ ಹೊರಗೆ ಬರಲಿದೆ. ಮಹಿಳೆಯರಿಗೆ ಬೆದರಿಸಿದ್ದು, ಧಮ್ಕಿ ಹಾಕಿದ್ದು ಎಲ್ಲವೂ ಆಚೆ ಬರಲಿದೆ. ನೀವು ಅದರ ಬಗ್ಗೆ ಏನು ಕ್ರಮ ತಗೊಂಡಿದ್ದೀರಿ ಗೃಹ ಸಚಿವರೇ? ಎಂದು ಪ್ರಶ್ನಿಸಿದರು.

ಪೆನ್ ಡ್ರೈವ್ ಹಂಚಿದವರು ಎಲ್ಲಿ? ಯಾಕೆ ಹಿಡಿದಿಲ್ಲ?

ಹಾಸನದಲ್ಲಿ ಪೆನ್‌ಡ್ರೈವ್‌ಗಳನ್ನು ಹಂಚಿರುವ ವ್ಯಕ್ತಿಗಳು ಎಲ್ಲಿ? ಎಫ್‌ಐಆರ್ ದಾಖಲಾಗಿರುವ ಒಬ್ಬ ವ್ಯಕ್ತಿಯನ್ನೂ ಎಸ್‌ಐಟಿ ಹಿಡಿಯಲಿಲ್ಲ. ವಿಡಿಯೊಗಳನ್ನು ಮೊದಲು ಕದ್ದು ಇಷ್ಟೆಲ್ಲಾ ರಾದ್ಧಾಂತಕ್ಕೆ ಕಾರಣನಾದ ಕಾರು ಚಾಲಕನನ್ನು ಇದುವರೆಗೂ ತನಿಖಾ ತಂಡ ಬಂಧನ ಮಾಡಿಲ್ಲ. ಎಸ್‌ಐಟಿ ತಂಡಕ್ಕೆ ಸಿಗದ ಆ ವ್ಯಕ್ತಿ ಸುಲಭವಾಗಿ ಖಾಸಗಿ ಚಾನೆಲ್‌ಗೆ ಸಿಗುತ್ತಾನೆ ಎಂದರೆ ಇಲ್ಲಿ ಏನ್ ನಡೆಯುತ್ತಿದೆ? ಎಂದು ಪ್ರಶ್ನಿಸಿದರು. ಇನ್ನೇನು ಪ್ರಜ್ವಲ್ ರೇವಣ್ಣ ಅವರ ವಿಡಿಯೊಗಳು ಹೊರಬರುತ್ತವೆ ಎಂದು ಫೇಸ್ ಬುಕ್‌ನಲ್ಲಿ ಸಮಯದ ಸಮೇತ ಪೋಸ್ಟ್ ಹಾಕಿದ್ದ ನವೀನ್ ಗೌಡ ಎನ್ನುವ ವ್ಯಕ್ತಿ ನಮ್ಮ ಪಕ್ಷದ ಶಾಸಕರಿಗೆ ಪೆನ್ ಡ್ರೈವ್ ಕೊಟ್ಟಿದ್ದೇನೆ ಎಂದು ಹೇಳಿದ್ದಾನೆ. ಅವನು ಏನೆಲ್ಲಾ ಹೇಳಿದ್ದಾನೆ, ಸಾಮಾಜಿಕ ಜಾಲತಾಣಗಳಲ್ಲಿ ಏನೆಲ್ಲಾ ಪೋಸ್ಟ್ ಮಾಡಿದ್ದಾನೆ ಎನ್ನುವುದು ಎಸ್‌ಐಟಿಗೆ ಗೊತ್ತಿಲ್ಲವೇ? ಇವನನ್ನು ಹಿಡಿದರೇ ಎಂದು ಪ್ರಶ್ನಿಸಿದರು.

ಚಿನ್ನಾಭರಣ ದರೋಡೆ: ಇಬ್ಬರ ಸೆರೆ

ಬೆಂಗಳೂರು: ಮನೆಯ ಹಿಂಬದಿಯ ಬಾಗಿಲು ಮುರಿದು ಒಳ ಪ್ರವೇಶಿಸಿ ಮನೆಯಲ್ಲಿದ್ದ ಲಕ್ಷಾಂತರ ರುಪಾಯಿ ನಗದು ಮತ್ತು ಚಿನ್ನಾಭರಣ ದೋಚಿದ್ದ ಇಬ್ಬರು ಆರೋಪಿಗಳನ್ನು ಅಶೋಕನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ.

ಆನೇಪಾಳ್ಯ ನಿವಾಸಿ ಆಸ್ಕರ್ ಮೆಹದಿ (30) ಮತ್ತು ನೀಲಸಂದ್ರ ನಿವಾಸಿ ಸಲ್ಮಾನ್‌ಖಾನ್ (30) ಬಂಧಿತ ಆರೋಪಿಗಳು. ಬಂಧಿತರಿಂದ 24.43 ಲಕ್ಷ ನಗದು ಮತ್ತು 150 ಗ್ರಾಂ ಚಿನ್ನಾಭರಣ ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ನೀಲಸಂದ್ರ ನಿವಾಸಿಯೊಬ್ಬರ ಮನೆಯಲ್ಲಿ ಮೇ. 7ರಂದು ಕಳವು ನಡೆದಿತ್ತು. ಆರೋಪಿಗಳು ಮನೆಯ ಹಿಂಬದಿ ಬಾಗಿಲು ಮುರಿದು, ಮನೆಗೆ ಒಳಕ್ಕೆ ನುಗ್ಗಿದ್ದರು, ಮನೆಯಲ್ಲೆ ತಡಕಾಡಿ, ಬೀರುವಿನಲ್ಲಿದ್ದ ನಗದು ಹಾಗೂ ಚಿನ್ನಾಭರಣ ಕಳವು ಮಾಡಿದ್ದರು. ಆರೋಪಿಗಳು ಖಾಸಗಿ ಬಸ್ ಮೂಲಕ ಮುಂಬೈಗೆ ಪರಾರಿಯಾಗಲು ಮುಂದಾಗಿದ್ದರು. ಈ ಖಚಿತ ಮಾಹಿತಿ ಮೇರೆಗೆ ಕ್ಷಿಪ್ರ ಕಾರ್ಯಾಚರಣೆ ನಡೆಸಿ, ಘಟನೆ ನಡೆದ 24 ಗಂಟೆಯಲ್ಲೆ ಇಬ್ಬರನ್ನು ಚಿತ್ರದುರ್ಗದಲ್ಲಿ ಬಂಧಿಸಿ, ನಗರಕ್ಕೆ ಕರೆತರಲಾಗಿತ್ತು. ಆರೋಪಿಗಳನ್ನು 10 ದಿನಗಳು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಿದಾಗ ಮನೆ ಕಳವು ಕೃತ್ಯದ ಬಗ್ಗೆ ಬಾಯ್ಬಿಟ್ಟಿದ್ದಾರೆ. ಆರೋಪಿಗಳು ಬೇರೆ ಕಡೆ ಅಡಮಾನ ಇಟ್ಟಿದ್ದ ಚಿನ್ನಾಭರಣ ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಜ್ವಲ್ ರೇವಣ್ಣ ಪ್ರಕರಣ: ಸ್ವತಂತ್ರ ತನಿಖಾ ಸಂಸ್ಥೆಗಳಿಗೆ ನೀಡಲು ಮನವಿ

ಬೆಂಗಳೂರು: ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಪ್ರಕರಣವನ್ನು ಸ್ವತಂತ್ರ ತನಿಖಾ ಸಂಸ್ಥೆಗಳಿಗೆ ನೀಡುವಂತೆ ರಾಜ್ಯ ಸರಕಾರಕ್ಕೆ ಸೂಚನೆ ನೀಡಬೇಕು ಎಂದು ಕೋರಿ ಕರ್ನಾಟಕ ರಾಷ್ಟ್ರ ಸಮಿತಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಪ್ರಕರಣ ಸಂಬಂಧ ಈಗಾಗಲೇ ಪಕ್ಷದ ವತಿಯಿಂದ ಹೊಳೆನರಸಿಪುರದಲ್ಲಿ ಅರ್ಜಿದಾರರು ದೂರು ಸಲ್ಲಿಸಿದ್ದು, ದೂರಿಗೆ ಸಂಬಂಧಿಸಿದಂತೆ ಸ್ವೀಕೃತಿ ಪತ್ರ ನೀಡಲಾಗಿದೆ. ಆದರೆ, ಎಫ್‌ಐಆರ್ ದಾಖಲಿಸಿಲ್ಲ, ಆದ್ದರಿಂದ ಎಫ್‌ಐಆರ್ ದಾಖಲಿಸಬೇಕು. ವಿಡಿಯೊ ಮಾಡಿರುವವರು ಮತ್ತು ವಿಡಿಯೊವನ್ನು ಇತರರಿಗೆ ಹಂಚಿಕೆ ಮಾಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಜತೆಗೆ, ಇಡೀ ಪ್ರಕರಣವನ್ನು ನ್ಯಾಯಾಂಗ ತನಿಖೆ ಸೇರಿದಂತೆ ಸ್ವತಂತ್ರ ತನಿಖಾ ಸಂಸ್ಥೆಗಳಿಗೆ ವಹಿಸಬೇಕು ಎಂದು ಕೋರಿದ್ದರು. ಮಂಗಳವಾರ ಅರ್ಜಿಯ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರಿದ್ದ ರಜಾಕಾಲದ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿತ್ತು. ಅಲ್ಲದೆ, ಪ್ರಕರಣ ಸಂಬಂಧ ಈಗಾಗಲೇ ಎಸ್‌ಐಟಿ ತನಿಖೆ ನಡೆಸುತ್ತಿದೆ. ಹಾಗಾಗಿ ಈ ಹಂತದಲ್ಲಿ ಮಧ್ಯಪ್ರವೇಶಿಸುವ ಅವಶ್ಯಕತೆ ಇಲ್ಲ ಎಂದು ತಿಳಿಸಿದ ಪೀಠ, ವಿಚಾರಣೆಯನ್ನು ಮುಂದೂಡಿತು.

ಪ್ರಕರಣದ ವಿಚಾರಣೆ ವೇಳೆ ಅರ್ಜಿದಾರರ ಪರ ವಾದ ಮಂಡಿಸಿದ ವಕೀಲ ಜಿ.ಆರ್. ಮೋಹನ್, ಪ್ರಕರಣ ಸಂಬಂಧ ಹೊಳೆನರಸೀಪುರ ಪೊಲೀಸ್ ಠಾಣೆಯಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ ದೂರು ದಾಖಲಿಸಿತ್ತು. ದೂರು ದಾಖಲಾಗಿದ್ದು, ಮತ್ತೊಂದು ದೂರು ದಾಖಲಿಸಿಕೊಳ್ಳುವುದಿಲ್ಲ ಎಂದು ಹೊಳೆನರಸೀಪುರ ಪೊಲೀಸರು ಹಿಂಬರಹ ಕೊಟ್ಟಿದ್ದರು. ಆ ಹಿಂಬರಹ ರದ್ದುಪಡಿಸಿ ದೂರು ದಾಖಲಿಸಿಕೊಳ್ಳಲು ಪೊಲೀಸರಿಗೆ ನಿರ್ದೇಶನ ನೀಡಬೇಕು ಎಂದು ಕೋರಿದರು.

ನಟಿ ಛಾಯಾ ಸಿಂಗ್ ತಾಯಿ ಮನೆಯಲ್ಲಿ ಕಳ್ಳತನ: ಬಂಧನ

ಬೆಂಗಳೂರು: ಬಹುಭಾಷಾ ನಟಿ ಛಾಯಾ ಸಿಂಗ್ ಅವರ ತಾಯಿಯ ಮನೆಯಲ್ಲಿ ಕಳ್ಳತನ ಎಸಗಿದ್ದ ಮನೆಗೆಲಸದ ಮಹಿಳೆಯನ್ನು ಬಸವೇಶ್ವರನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ.

ಉಷಾ ಬಂಧಿತ ಆರೋಪಿ. ಎನ್‌ಎಚ್‌ಸಿಎಸ್ ಲೇಔಟ್‌ನಲ್ಲಿರುವ ಛಾಯಾ ಸಿಂಗ್ ಅವರ ತಾಯಿ ಚಮನ್ ಲತಾ ಸಿಂಗ್ ಅವರ ಮನೆಯಲ್ಲಿ ಕೆಲಸ ಮಾಡುತ್ತಿದ್ದ ಉಷಾ, ಚಿನ್ನಾಭರಣ ಕಳ್ಳತನ ಮಾಡಿದ್ದಳು. ಏಪ್ರಿಲ್ 13ರಂದು ಕೊಠಡಿಯಲ್ಲಿದ್ದ ಬೀರುವಿನ ಲಾಕರ್ ಅನ್ನು ಆರೋಪಿ ಮುಚ್ಚುತ್ತಿರುವುದನ್ನು ಗಮನಿಸಿದ್ದ ಚಮನ್ ಲತಾ, ಅನುಮಾನಗೊಂಡು ಪ್ರಶ್ನಿಸಿದ್ದರು. ಆದರೆ ಆರೋಪಿ ಸರಿಯಾಗಿ ಮಾತನಾಡದೇ ಸನ್ನೆಯಲ್ಲಿ ಉತ್ತರ ನೀಡಲು ಯತ್ನಿಸಿದ್ದಳು. ತಕ್ಷಣ ತಡೆದು ಪರಿಶೀಲಿಸಿದಾಗ ಆಕೆಯ ಬಾಯಲ್ಲಿ ಚಿನ್ನದ ಮೂಗಿನ ಬೊಟ್ಟು ಬಚ್ಚಿಟ್ಟುಕೊಂಡಿರುವುದು ಪತ್ತೆಯಾಗಿತ್ತು.

ಬಳಿಕ ಬೀರು ಪರಿಶೀಲಿಸಿದಾಗ ವಿವಿಧ ಆಭರಣಗಳು ನಾಪತ್ತೆಯಾಗಿರುವುದನ್ನು ತಿಳಿದ ಚಮನ್ ಲತಾ, ಬಸವೇಶ್ವರನಗರ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಉಷಾಳನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದರು. ಈ ಸಂದರ್ಭದಲ್ಲಿ ತಪ್ಪೊಪ್ಪಿಕೊಂಡಿದ್ದಾಳೆ. ಬಂಧಿತಳಿಂದ ಒಟ್ಟು 66 ಗ್ರಾಂ ಚಿನ್ನ, 155 ಗ್ರಾಂ ಬೆಳ್ಳಿಯ ವಸ್ತುಗಳುಸಹಿತ ಒಟ್ಟು 4 ಲಕ್ಷ ರು. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

PUBLIC NOTICE

My client **Smt. Nethravathi B.S.,** has lost/misplaced the original Sale Deed dated 09.05.2024, Registered as Document No. 4959/2011-12 of Book-I, pertains to the property Southern-half Portion of the Property bearing **Site No. 5A,** Old Panchayath Khatha No. 2233, Assessment No. 95/1, Present Khatha No. 2233/5A, Situated at **Laskhmipura Village, Dasanapura Hobli, Bangalore North Taluk,** at Gnanabharathi, Bangalore, on 09.05.2024. The General Public is hereby informed that, any transaction whatsoever with respect to the said property based on the said document, is not valid and not binding on my client. And Finders of the same kindly return the same or if any one has any claim, right, on the said property, are requested to meet the undersigned ***within 07 days*** from the date of issue of this notice.

Contact
MUNIRAJA. M, Advocate,
No. 34, 21st Main, J.C. Nagar,
M.L. Puram, Bangalore-560 086.
Mob: 9535156146

IN THE COURT OF THE CITY CIVIL JUDGE AT BENGALURU (CCH-6)
P & Sc. No. 163/2074

PETITIONERS: 1. KUNDAN MAL JAIN,
S/o. Late Sri Rajingji, Aged 63 years,
2. Smt. LALITA KUNDAN JAIN,
W/o. Sri Kundan Mal Jain, Aged 62 years,
3. JAI KUNDAN JAIN,
S/o. Sri Kundan Mal Jain, Aged 28 years,
4. Miss. VIDHI KUNDAN JAIN,
D/o. Sri Kundan Mal Jain, Aged 31 years,
Petitioners 1 to 4 are : R/a. No.176, 5th Main, 4th Block, Jayanagar, Bengaluru-560 011
5. Smt. VINAL JAIN, W/o. Sri Shreyas Uttam Chowhan, Aged 38 years, No.426, 7th 'B' Main, 4th Block, Jayanagar, Bengaluru-560 011

Vs

RESPONDENTS: NIL

Whereas the above named has made petition to this court under Section 372 of the Indian Succession Act for grant of Succession Certificate in favour of the petitioners in respect of the below schedule mentioned as held by **Miss. POONAM K JAIN** the daughter of petitioner Nos.1 and 2 and the sister of the petitioner Nos 3 to 5 herein who expired **on 05/12/2023 at Bengaluru.** Interested parties are hereby called to appear in the court in person or by pleader duly instructed on **05/07/2024 at 11 A. M.** to show cause against the petition, falling wherein the petition will be heard and declared as ex parte.

SCHEDULE
SECURITIES

1. **SB A/c. No.54033163909** with State Bank of India, Sultanpet Main Road, Bengaluru-53 and the balance is Rs.16,46,003/-(as on 27/02/2024) with upto date accrued interest.
2. **PPF A/c. No.64027441462** State Bank of India, Sultanpet Main Road, Bengaluru-53. Balance being Rs.33,47,977/- (as on 12/04/2023) with upto date accrued interest.

Given under my hand and the seal of the court, this **29th day of April 2024.**

By order of the Court, Senior Sheristedar City Civil Court, Bangalore.

S.J. SANGHVI,
Manjappa V, Advocates,
518, Avenue Road, Bengaluru-560 002.

ಎಂಟು ಡ್ರಗ್ಸ್ ಪೆಡ್ಲರ್‌ಗಳ ಬಂಧನ

ಅಪರಾಧ ಸುದ್ದಿಗಳು

ಬೆಂಗಳೂರು: ನಗರದ ವಿವಿಧ ಕಡೆ ಅಕ್ರಮ ಮಾದಕ ವಸ್ತುಗಳನ್ನು ಸಂಗ್ರಹಿಸಿ ಮಾರಾಟ ಮಾಡುತ್ತಿದ್ದ ಮೂವರು ವಿದೇಶಿ ಪ್ರಜೆ ಸೇರಿ 8 ಜನ ಡ್ರಗ್ಸ್ ಪೆಡ್ಲರ್‌ಗಳನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದರು.

ನೈಜೀರಿಯಾದ ಅಗುಸ್ಟೀನ್ ನೋನೋಸ್ (39), ಉಡೇರಿಕ್ ಫಿಡಲಿಸ್ (34), ಎರೇಮನ್ ಸ್ಮಾರ್ಟ್ (40) ಸೇರಿದಂತೆ ಎಂಟು ಜನರ ಡ್ರಗ್ಸ್ ದಂಧೆಕೋರರನ್ನು ಬಂಧಿಸಿದ್ದಾರೆ. ಸಂಪಿಗೇಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಬಾತ್ಮಿದಾರರಿಂದ ಪಡೆದ ಖಚಿತ ಮಾಹಿತಿ ಮೇರೆಗೆ ಸಿಸಿಬಿ ತಂಡ ದಾಳಿ ನಡೆಸಿ 50 ಲಕ್ಷ ರು. ಮೌಲ್ಯದ ಎಂಡಿಎಂ ಕ್ರಿಸ್ಟಲ್, ಕೊಕೇನ್ ಸೇರಿ ಇತರೆ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಮೂವರು ವಿದೇಶಿಗರು ಬಿಸಿನೆಸ್ ಹಾಗೂ ಮೆಡಿಕಲ್ ವೀಸಾದಡಿ ಭಾರತಕ್ಕೆ ಬಂದಿದ್ದರು. ಐಷಾರಾಮಿ ಜೀವನ ನಡೆಸುವ ಉದ್ದೇಶದಿಂದ ಗೋವಾ, ಮುಂಬೈ ಮತ್ತು ದೆಹಲಿಯಲಿ ವಾಸವಾಗಿರುವ ನೈಜೀರಿಯಾ ದೇಶದ ಪ್ರಜೆಗಳಿಂದ ಮಾದಕ ವಸ್ತುಗಳನ್ನು ಬೆಂಗಳೂರಿಗೆ ಕಡಿಮೆ ಬೆಲೆಯಲ್ಲಿ ತರಿಸಿಕೊಳ್ಳುತ್ತಿದ್ದರು. ನಂತರ ಎಂಡಿಎಂ ಕ್ರಿಸ್ಟಲ್ ಮತ್ತು ಕೊಕೇನ್ ಅನನ್ನು 1 ಗ್ರಾಂಗೆ 10 ಸಾವಿರದಿಂದ 12 ಸಾವಿರಗೆ ಮಾರಾಟ ಮಾಡುತ್ತಿದ್ದರು. ಈ ಕುರಿತು ಸಂಪಿಗೇಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸಿಸಿಬಿ ಪೊಲೀಸರು ಎನ್‌ಡಿಪಿಎಸ್ ಕಾಯಿದೆ ಹಾಗೂ ವಿದೇಶಿ ಕಾಯಿದೆಯಡಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

10 ಲಕ್ಷ ಮೌಲ್ಯದ ಗಾಂಜಾ ವಶಕ್ಕೆ

ವಿವಿಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಡ್ರಗ್ಸ್ ಪೆಡ್ಲಿಂಗ್ ಮಾಡುತ್ತಿದ್ದ ಓರ್ವ ಪೆಡ್ಲರ್‌ನ್ನು ವಶಕ್ಕೆ ಪಡೆದಿದ್ದಾರೆ. ಬಂಧಿತನಿಂದ 10 ಲಕ್ಷ ರು. ಮೌಲ್ಯದ 5 ಕೆ.ಜಿ.ಗಾಂಜಾ, 7 ಎಲ್‌ಎಸ್‌ಡಿ ಸ್ಟ್ರಿಪ್ಸ್, 25 ಗ್ರಾಂ ಚರಸ್, 1 ಮೊಬೈಲ್ ಫೋನ್ ಹಾಗೂ ಒಂದು ಕಾರನ್ನು ವಶಕ್ಕೆ ಪಡೆದಿದ್ದಾರೆ. ಮುಂದುವರೆದು ಕಾಟನ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮಾದಕ ವಸ್ತು ಸಾಗಣೆ ಮಾಡುತ್ತಿದ್ದ ವ್ಯಕ್ತಿಯನ್ನು ಬಂಧಿಸಿ 14 ಲಕ್ಷ ರು. ಮೌಲ್ಯದ 7 ಕೆ.ಜಿ.ಗಾಂಜಾ ವಶಕ್ಕೆ ಪಡೆದಿದ್ದಾರೆ. ಅಲ್ಲದೇ ಕೊತ್ತನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಕ್ರಮ ಡ್ರಗ್ಸ್ ದಂಧೆ ನಡೆಸುತ್ತಿದ್ದ ವ್ಯಕ್ತಿಯನ್ನು ವಶಕ್ಕೆ ಪಡೆದಿದ್ದಾರೆ. ನಗರದ ಖಾಸಗಿ ಬ್ಯಾಂಕ್ ಉದ್ಯೋಗಿದ್ದಲ್ಲಿಕೊಂಡು ಆಂಧ್ರಪ್ರದೇಶದಿಂದ ತನ್ನ ಪರಿಚಯಸ್ತ ಸ್ನೇಹಿತರ ಕಡೆಯಿಂದ ಡ್ರಗ್ಸ್‌ಗಳನ್ನು ಖರೀದಿ ಮಾಡುತ್ತಿದ್ದನು. ಆರೋಪಿಯಿಂದ 2 ಕೋಟಿ ಮೌಲ್ಯದ 2 ಕೆ.ಜಿ.ತೂಕ ಹಾಶಿನ್ ಅಯಿಲ್, 716 ಗ್ರಾಂ ಚರಸ್ ವಶಕ್ಕೆ ಪಡೆಯಲಾಗಿದೆ ಎಂದು ನಗರ ಪೊಲೀಸ್ ಆಯುಕ್ತರು ಬಿ.ದಯಾನಂದ್ ಮಾಹಿತಿ ನೀಡಿದ್ದಾರೆ.

ಖಾಸಗಿ ಶಾಲೆಗೆ ಇ-ಮೇಲ್ ಬಾಂಬ್ ಬೆದರಿಕೆ

ಬೆಂಗಳೂರು: ಎರಡು ದಿನಗಳ ಹಿಂದಷ್ಟೇ ನಗರದ ಪ್ರತಿಷ್ಠಿತ ಖಾಸಗಿ ಆಸ್ಪತ್ರೆಯಲ್ಲಿ ಬಾಂಬ್ ಇಟ್ಟಿರುವುದಾಗಿ ಬೆದರಿಕೆ ಇಮೇಲ್ ರವಾನಿಸಿದ್ದ ಕಿಡಿಗೇಡಿಗಳು, ತಡರಾತ್ರಿ ಅಮೃತಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಶಾಲೆಯೊಂದಕ್ಕೆ ಬಾಂಬ್ ಬೆದರಿಕೆ ಸಂದೇಶ ರವಾನಿಸಿದ್ದಾರೆ. ಕೆಂಪಾಪುರದಲ್ಲಿರುವ ಖಾಸಗಿ ಶಾಲೆಗೆ ಬೆದರಿಕೆ ಇಮೇಲ್ ಬಂದಿದೆ. ಮಂಗಳವಾರ ಬೆಳಗ್ಗೆ 7:30ಕ್ಕೆ ಎಂದಿನಂತೆ ಶಾಲೆ ಆರಂಭವಾಗಿತ್ತು. ಶಾಲೆಯ ಅಧಿಕೃತ ಇಮೇಲ್ ಖಾತೆ ಪರಿಶೀಲಿಸಿದಾಗ ಮಧ್ಯರಾತ್ರಿ 12.20ರ ಸುಮಾರಿಗೆ ಬಾಂಬ್ ಬೆದರಿಕೆ ಇಮೇಲ್ ಕಳುಹಿಸಿರುವುದು ಗೊತ್ತಾಗಿದೆ. ಬಾಂಬ್ ಹುಸಿ ಬೆದರಿಕೆ: ಶಾಲೆಯ ಆಡಳಿತ ಮಂಡಳಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದೆ. ಘಟನಾ ಸ್ಥಳಕ್ಕೆ ಶ್ವಾನದಳ, ಬಾಂಬ್ ನಿಷ್ಕ್ರಿಯದಳದೊಂದಿಗೆ ಆಗಮಿಸಿದ ಅಮೃತಹಳ್ಳಿ ಪೊಲೀಸರು ಪರಿಶೀಲನೆ ನಡೆಸಿದರು. ಬಳಿಕ ಇದೊಂದು ಹುಸಿ ಬಾಂಬ್ ಬೆದರಿಕೆ ಎಂದು ಖಾತ್ರಿಪಡಿಸಿದರು.

ದೇವಸ್ಥಾನದಲ್ಲಿ ಕಳ್ಳತನ; ಆರೋಪಿ ಸೆರೆ

ಬೆಂಗಳೂರು: ದೇವಸ್ಥಾನದಲ್ಲಿ ಕಳ್ಳತನ ಮಾಡಿ ಒಂದು ವರ್ಷದಿಂದ ತಲೆಮರೆಸಿಕೊಂಡಿದ್ದ ಕುಖ್ಯಾತ ಆರೋಪಿ ಯನ್ನ ಬಸವೇಶ್ವರನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ. ಸೈಯದ್ ಅಹಮದ್ ಬಂಧಿತ ಆರೋಪಿ. ಕಳೆದ ವರ್ಷ ಫೆಬ್ರವರಿಯಲ್ಲಿ ಕಮಲಾನಗರದ ದೇವಸ್ಥಾನವೊಂದರ ಬಾಗಿಲು ಮುರಿದು ಕಳ್ಳತನ ಎಸಗಿದ್ದ ಆರೋಪಿಯ ವಿರುದ್ಧ ಬಸವೇಶ್ವರನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ದೇವಾಲಯದ ಬಾಗಿಲಿನ ಬೀಗ ಮುರಿದು ಒಳನುಗ್ಗಿದ್ದ ಆರೋಪಿ ವಿಗ್ರಹದ ಕೊರಳಿನಲ್ಲಿದ್ದ 12 ಗ್ರಾಂ ತೂಕದ ಚಿನ್ನದ ಸರ ಮತ್ತಿತರ ಆಭರಣಗಳನ್ನ ದೋಚಿ ಪರಾರಿಯಾಗಿದ್ದ. ದೇವಾಲಯದ ಅರ್ಚಕರು ನೀಡಿದ ದೂರಿನನ್ವಯ ಬಸವೇಶ್ವರ ನಗರ ಪೊಲೀಸ್ ಠಾಣೆಯಲ್ಲಿ ಕಳವು ಪ್ರಕರಣ ದಾಖಲಾಗಿತ್ತು. ಒಂದು ವರ್ಷದಿಂದ ಆರೋಪಿ ಪತ್ತೆಯಾಗಿರಲಿಲ್ಲ. ಏ. 28ರಂದು ಶಂಕರಮಠ ಜಂಕ್ಷನ್ ಬಳಿ ಆರೋಪಿಯನ್ನ ಬಂಧಿಸಲಾಗಿದೆ. ಆರೋಪಿಯ ವಿರುದ್ಧ ತುಮಕೂರು ನಗರ ಮತ್ತು ಗ್ರಾಮಾಂತರ, ಮೈಸೂರು ನಗರದ ವಿ.ವಿ. ಪುರ ವ್ಯಾಪ್ತಿ ಯಲ್ಲಿ ಕಳವು ಪ್ರಕರಣಗಳಿವೆ. ಆರೋಪಿಯಿಂದ ಒಟ್ಟು 38 ಲಕ್ಷ ಮೌಲ್ಯದ 632 ಗಾಂ ತೂಕದ ಚಿನ್ನಾಭರಣಗಳನ್ನು, ಸುಮಾರು 5 ಲಕ್ಷ ಮೌಲ್ಯದ 22.76 ಗ್ರಾಂ ವಜ್ರದ ಆಭರಣಗಳು ಹಾಗೂ ಸುಮಾರು 80 ಸಾವಿರ ಮೌಲ್ಯದ 1 ಕೆ.ಜಿ ಬೆಳ್ಳಿ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಚೇರಿಯಲ್ಲೇ ಕಳ್ಳತನ

ಬೆಂಗಳೂರು: ತಾನು ಕೆಲಸ ಮಾಡುತ್ತಿದ್ದ ಕಚೇರಿಯಲ್ಲೇ ಕಳ್ಳತನ ಮಾಡಿ ಪರಾರಿಯಾಗಿದ್ದ ಆರೋಪಿಯನ್ನು ವಿಜಯನಗರ ಪೊಲೀಸರು ಬಂಧಿಸಿದ್ದಾರೆ. ಮಹೇಶ್ ಬಂಧಿತ ಆರೋಪಿ. ಮಾರ್ಚ್ 20ರ ರಾತ್ರಿ ವಿಜಯನಗರದ ಸರ್ವಿಸ್ ರಸ್ತೆಯಲ್ಲಿರುವ ಕೆ.ಎನ್.ಎಸ್.ಇನ್ಫ್ರಾಸ್ಟ್ರಕ್ಚರ್ ಪ್ರೈವೇಟ್ ಲಿಮಿಟೆಡ್ ಕಚೇರಿಯ ಕ್ಯಾಶ್ ಬಾಕ್ಸ್‌ನಲ್ಲಿದ್ದ 25 ಲಕ್ಷ ರುಪಾಯಿ ನಗದು ಕದ್ದು ಆರೋಪಿ ತಲೆಮರೆಸಿಕೊಂಡಿದ್ದ. ನಿವೃತ್ತ ಸಬ್‌ಇನ್ಸ್‌ಪೆಕ್ಟರ್‌ರ ಮಗನಾಗಿರುವ ಆರೋಪಿ ಕಚೇರಿಯಲ್ಲಿ ಡಾಕ್ಯುಮೆಂಟ್ ಎಕ್ಸಿಕ್ಯುಟಿವ್ ಕೆಲಸ ಮಾಡಿಕೊಂಡಿದ್ದ. ಇತ್ತೀಚೆಗೆ ಕಚೇರಿ ಸಿಬ್ಬಂದಿ ಸಂಪರ್ಕಕ್ಕೆ ಸಿಗುತ್ತಿಲ್ಲ ಎಂದು ಕಂಪನಿಯ ಮಾಲೀಕರು ವಿಜಯನಗರ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣದ ತನಿಖೆ ಕೈಗೊಂಡ ಪೊಲೀಸರು ಏಪ್ರಿಲ್ 28ರಂದು ಮಧ್ಯಾಹ್ನ ಮಡಿಕೇರಿ ಟೋಲ್‌ಗೇಟ್ ಬಳಿ ಆರೋಪಿಯನ್ನು ಬಂಧಿಸಿದ್ದಾರೆ. ಬಳಿಕ ಮೂಡಲಪಾಳ್ಯದಲ್ಲಿರುವ ತನ್ನ ಸ್ನೇಹಿತನ ಕೊಠಡಿಯಲ್ಲಿಟ್ಟಿದ್ದ 24.50 ಲಕ್ಷ ರು. ಹಣ ಜಪ್ತಿ ಮಾಡಿದ್ದಾರೆ.

ಜು.3: ಹೊಸ ಕ್ರಿಮಿನಲ್ ಕಾನೂನು

ಬೆಂಗಳೂರು: ಕೇಂದ್ರ ಸರಕಾರ ಮೂರು ಹೊಸ ಕ್ರಿಮಿನಲ್ ಕಾಯಿದೆಗಳನ್ನು ಹೊಸದಾಗಿ ಜಾರಿ ಮಾಡಿದೆ. ಆ ಕಾಯ್ದೆಗಳು ಜುಲೈತಿಂಗಳಿಂದ ಅನುಷ್ಠಾನವಾಗಲಿದೆ ಎಂದು ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಎಂ.ಎನ್.ಅನುಚೇತನ್ ಹೇಳಿದರು.

ನಗರದ ಕೆಎಲ್‌ಇ ಕಾನೂನು ಕಾಲೇಜಿನಲ್ಲಿ ಪಶ್ಚಿಮ ಸಂಚಾರ ವಿಭಾಗದಿಂದ ನಡೆದ ಎರಡು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಕ್ರಿಮಿನಲ್ ಕಾಯಿದೆಗಳ ಬದಲಾವಣೆ ಬಗ್ಗೆ ಸುಮಾರು ವರ್ಷಗಳಿಂದ ವಿವಿಧ ಸಂಘಟನೆಗಳು ಮತ್ತು ಪೊಲೀಸ್ ಇಲಾಖೆಯ ಬೇಡಿಕೆಯಾಗಿತ್ತು. ಅದು ಈಗ ಈಡೇರಿದೆ. ಸುಮಾರು 70 ವರ್ಷಗಳಿಂದ ದೇಶದಲ್ಲಿ ಜಾರಿಯಲ್ಲಿರುವ ಕ್ರಿಮಿನಲ್ ಕಾಯಿದೆಗಳನ್ನು ಕೇಂದ್ರ ಸರಕಾರ ಮಾರ್ಪಡಿಸಿದೆ. ಸದ್ಯ ಮೂರು ಕ್ರಿಮಿನಲ್ ಕಾಯ್ದೆಗಳನ್ನು ಹೊಸದಾಗಿ ಪೊಲೀಸ್ ಇಲಾಖೆಯಲ್ಲಿ ಅಳವಡಿಸಲಾಗಿದೆ. ಆದ್ದರಿಂದ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಾಯ್ದೆಗಳಲ್ಲಿನ ಕಲಂಗಳನ್ನು ತಿಳಿದುಕೊಳ್ಳಬೇಕು.

ಅನ್ಯಾಯಕ್ಕೊಳಗಾದ ವ್ಯಕ್ತಿಗಳಿಗೆ ನ್ಯಾಯ ದೊರಕಿಸಿಕೊಡಬೇಕಾದರೆ ಆರೋಪಿಗಳಿಗೆ ಶಿಕ್ಷೆಯಾಗುವ ರೀತಿಯಲ್ಲಿ ಕ್ರಿಮಿನಲ್ ಕಾಯ್ದೆಗಳನ್ನು ಅರಿತುಕೊಂಡು ನ್ಯಾಯಾಲಯಕ್ಕೆ ಸೂಕ್ತ ಪುರಾವೆ ಸಮೇತ ವರದಿ ಸಲ್ಲಿಸಬೇಕು. ಆದ್ದರಿಂದ ಇಲಾಖೆ ಕಾಯ್ದೆ, ಕರ್ತವ್ಯಗಳನ್ನು ನಾವು ಅರಿತುಕೊಳ್ಳಬೇಕು ಎಂದರು. ಉಪ ಪೊಲೀಸ್ ಆಯುಕ್ತ ಅನಿತಾ ಹದ್ದಣ್ಣವರ ಮಾತನಾಡಿ, ನಗರದ ಕೆಎಲ್‌ಇ ಕಾನೂನು ಕಾಲೇಜಿನಲ್ಲಿ ಎರಡು ದಿನಗಳ ಕಾಲ ನಡೆಯುವ ಕಾರ್ಯಾಗಾರದ ಲಾಭವನ್ನು ಇಲಾಖೆ ಸಿಬ್ಬಂದಿಗಳು, ತನಿಖಾಧಿಕಾರಿಗಳು ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಕೆಎಲ್‌ಇ ಕಾಲೇಜಿನ ಪ್ರೊ.ಜೆ.ಎಂ.ಮಲ್ಲಿಕಾರ್ಜುನಯ್ಯ, ಸಹಾಯಕ ಪೊಲೀಸ್ ಆಯುಕ್ತ ಸದಾನಂದ ತಿಪ್ಪಣ್ಣವರ ಸೇರಿದಂತೆ ವಿವಿಧ ಸಂಚಾರ ಠಾಣೆ ಸಿಬ್ಬಂದಿಗಳು ಇದ್ದರು.

ಸರಕಾರಿ ಕೆಲಸ ಭರವಸೆ: ವಂಚನೆ

ಬೆಂಗಳೂರು: ಸರಕಾರಿ ಉದ್ಯೋಗ ಕೊಡಿಸುವುದಾಗಿ ಭರವಸೆ ನೀಡಿ ಹಣ ಪಡೆದು ವಂಚಿಸುತ್ತಿದ್ದ ಇಬ್ಬರು ಆರೋಪಿಗಳನ್ನು ವಿಜಯನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ.

ಬೆಂಗಳೂರಿನ ಸಿಐಡಿ ಘಟಕದಲ್ಲಿ ಸೆಕ್ಷನ್ ಸೂಪರಿಂಟೆಂಡೆಂಟ್ ಆಗಿ ಕೆಲಸ ನಿರ್ವಹಿಸುತ್ತಿದ್ದ ಅನಿತಾ ಬಿ. ಎಸ್ ಹಾಗೂ ರಾಮಚಂದ್ರ ಭಟ್ ಎಂಬಾತನನ್ನು ಬಂಧಿಸಲಾಗಿದೆ. ಆರೋಪಿಗಳ ವಿರುದ್ಧ ಚಿಕ್ಕಮಗಳೂರಿನ ಕಲ್ಯಾಣನಗರದ ನಿವಾಸಿ ಸುನಿಲ್ ಎಂಬುವವರು ವಿಜಯನಗರ ಠಾಣೆಗೆ ದೂರು ನೀಡಿದ್ದರು. 2021ರಲ್ಲಿ ಸ್ನೇಹಿತರೊಬ್ಬರ ಮೂಲಕ ಸುನಿಲ್ ಅವರಿಗೆ ರಾಮಚಂದ್ರ ಭಟ್ ಪರಿಚಯವಾಗಿತ್ತು. 'ತನಗೆ ಬೆಂಗಳೂರಿನ ಸಿಐಡಿ ಘಟಕ ಸೆಕ್ಷನ್ ಸೂಪರಿಂಟೆಂಡೆಂಟ್ ಆಗಿರುವ ಅನಿತಾ ಎಂಬುವವರ ಪರಿಚಯವಿದೆ. ಅವರಿಗೆ ಕೆಪಿಎಸ್‌ಸಿ ಹಾಗೂ ಸರಕಾರದ ಉನ್ನತ ಹುದ್ದೆಯಲ್ಲಿರುವ ಹಲವು ಪ್ರಭಾವಿ ವ್ಯಕ್ತಿಗಳ ಸಂಪರ್ಕವಿದ್ದು, ನಿಮಗೆ ಸರಕಾರಿ ಕೆಲಸ ಕೊಡಿಸುತ್ತೇನೆ' ಎಂದು ರಾಮಚಂದ್ರ ಭಟ್ ನಂಬಿಸಿದ್ದ. ಪ್ರತಿಯಾಗಿ ಅನಿತಾ ಅವರು ಕೇಳಿದಷ್ಟು ಹಣ ಹೊಂದಿಸಿ ಕೊಡಬೇಕೆಂದು ತಿಳಿಸಿದ್ದ.

ಬಳಿಕ ಅನಿತಾಳನ್ನು ಸಿಐಡಿ ಕಚೇರಿಯಲ್ಲೇ ಸುನಿಲ್‌ಗೆ ಭೇಟಿ ಮಾಡಿಸಿದ್ದ. ಇದೇ ವೇಳೆ, ತನ್ನ ಕಚೇರಿ, ಐಡಿ ಕಾರ್ಡ್ ತೋರಿಸಿ ನಂಬಿಸಿದ್ದ ಅನಿತಾ, ಕೆಪಿಎಸ್‌ಸಿ ಮೂಲಕ ಪಿಡಬ್ಲ್ಯುಡಿ ಇಲಾಖೆಯಲ್ಲಿ ಸಹಾಯಕ ಎಂಜಿನಿಯರ್ ಹುದ್ದೆ ಕೊಡಿಸುವುದಾಗಿ ಸುನೀಲ್‌ನನ್ನು ನಂಬಿಸಿದ್ದಳು. ಮತ್ತು ಇದಕ್ಕಾಗಿ 40 ಲಕ್ಷ ರು. ಹಣ ಕೊಡಬೇಕು ಎಂದು ಬೇಡಿಕೆಯಿಟ್ಟಿದ್ದಳು. ಆರೋಪಿಗಳ ಸಂಚು ಅರಿಯದ ಸುನಿಲ್, 2021ರ ಡಿಸೆಂಬರ್ ಹಾಗೂ 2022ರ ಫೆಬ್ರವರಿಯಲ್ಲಿ ಆರೋಪಿಗಳಿಗೆ ಹಂತ ಹಂತವಾಗಿ 40 ಲಕ್ಷ ರು. ನೀಡಿದ್ದರು.

ಆದರೆ, ನಂತರದಲ್ಲಿ ಸುನಿಲ್ ಅವರಿಗೆ ಯಾವುದೇ ಸರಕಾರಿ ಕೆಲಸ ಕೊಡಿಸಿರಲಿಲ್ಲ, ಹಣ ವಾಪಸ್ ಹಿಂತಿರುಗಿಸುವಂತೆ ಕೇಳಿದಾಗ ಅವಾಚ್ಯ ಶಬ್ದಗಳಿಂದ ನಿಂದಿಸಿ ಬೆದರಿಕೆ ಹಾಕುತ್ತಿದ್ದಾರೆ ಎಂದು ವಿಜಯನಗರ ಠಾಣೆಗೆ ಸುನಿಲ್ ದೂರು ನೀಡಿದ್ದರು. ದೂರಿನ ಅನ್ವಯ ಪ್ರಕರಣ ದಾಖಲಿಸಿಕೊಂಡು ಆರೋಪಿಗಳನ್ನ ಬಂಧಿಸಲಾಗಿದೆ. ಆರೋಪಿಗಳಿಬ್ಬರೂ ಇದೇ ಮಾದರಿಯಲ್ಲಿ ಇನ್ನೂ ಕೆಲವರಿಂದ ಸುಮಾರು ಒಂದು ಕೋಟಿಗೂ ಅಧಿಕ ಹಣ ಪಡೆದು ವಂಚಿಸಿರುವುದು ತನಿಖೆಯಿಂದ ತಿಳಿದು ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಎಫ್‌ಐಬಿಎ ಶಿಸ್ತು ಸಮಿತಿಯಲ್ಲಿ ದಯಾನಂದ್

ಬೆಂಗಳೂರು: 2023-27ರವರೆಗಿನ ಅವಧಿಗೆ ಅಂತಾರಾಷ್ಟ್ರೀಯ ಬಾಸ್ಕೆಟ್‌ಬಾಲ್ ಫೆಡರೇಷನ್ ಶಿಸ್ತುಸಮಿತಿಯ ಸದಸ್ಯರ ಪಟ್ಟಿಯಲ್ಲಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ಥಾನ ಪಡೆದಿದ್ದಾರೆ. ಕರ್ನಾಟಕ ಬಾಸ್ಕೆಟ್ ಬಾಲ್ ಅಸೋಸಿಯೇಷನ್‌ನ ಅಧ್ಯಕ್ಷ ಬಿ. ದಯಾನಂದ್, ಮುಂದಿನ ನಾಲ್ಕು ವರ್ಷಗಳ ಅವಧಿಗೆ ಎಫ್‌ಐಬಿಎದ ಶಿಸ್ತು ಸಮಿತಿಯಲ್ಲಿ ಕಾರ್ಯನಿರ್ವಹಿಸ ಲಿದ್ದಾರೆ. ಶಿಸ್ತು ಸಮಿತಿಯ ಏಳು ಜನ ಸದಸ್ಯರ ಪೈಕಿ ದಯಾನಂದ್ ಅವರು ಏಕೈಕ ಭಾರತೀಯರಾಗಿದ್ದು, ಜತೆಗೆ ಬಲ್ಗೇರಿಯಾದ ಎಲಿಯೊನೋರಾ ರಂಗೆಲೋವಾ, ಸ್ಲೋವಾಕಿಯಾದ ಲುಬೋರ್ಮಿ ಕೊಟ್ಲೆಬಾ, ಸ್ವಿಜರ್ ಲ್ಯಾಂಡ್‌ನ ಒಲಿವರ್ ಡಕ್ರೆ, ರಾಬರ್ಟ್ ಫಾಕ್ಸ್, ನ್ಯೂಜಿಲೆಂಡ್‌ನ ಕ್ರಿಸ್ ಪ್ಯಾಟರ್ಸನ್, ಸ್ಪೇನ್‌ನ ಬೆಲೆನ್ ಕೊಸೆರೋ ಮೋರಾ ಸಹ ಸಮಿತಿಯಲ್ಲಿ ಸ್ಥಾನ ಪಡೆದಿದ್ದಾರೆ.